d) Since no poor quality works have not been done, this question does not arise.

e) Rs. 12.28 lakhs has been provided under Pre-monsoon maintenance during the year 2009-10, roads have been enabled for smooth traffic by undertaking repair works.

642 ಶ್ರೀ ನರೇಂದ್ರ ಬಾಬು ಸಿ.ಎ. (ಮಹಾಲಕ್ಷ್ಮಿ ಲೇಔಟ್) : ಮಾನ್ಯ ಅಬಕಾರಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಯಾವ ಯಾವ ಬಡಾವಣೆಯನ್ನು ಗುರುತಿಸಲಾಗಿದೆ.

ಇ) ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು?

ಈ) ಬೆಂಗಳೂರು ನಗರಕ್ಕೆ ಶಾಶ್ವತವಾಗಿ ಕುಡಿಯುವ ನೀರನ್ನು ಒದಗಿಸಲು ಯಾವ ಯಾವ ಯೋಜನೆಗಳನ್ನು ಕೈಗೊಳ್ಳಲಾಗಿದೆ.

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಅಬಕಾರಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) :

ಅ) ಹೌದು.

ಆ) ಬೆಂಗಳೂರು ನಗರದ ಪೂರ್ವ ಮತ್ತು ಉತ್ತರ ಭಾಗಗಳಲ್ಲಿರುವ ಬಡಾವಣೆಗಳಲ್ಲಿ ನೀರಿನ ಸಮಸ್ಯೆ ಇರುವುದೆಂದು ಗುರುತಿಸಿದೆ.

ಇ) ನೀರಿನ ಸಮಸ್ಯೆಯನ್ನು ಬಗೆಹರಿಸಲು, ಸರಾಸರಿ ಪ್ರತಿದಿನ 80 ದಶಲಕ್ಷ ಲೀಟರ್ ನೀರನ್ನು ಹೆಚ್ಚುವರಿಯಾಗಿ ಪಂಪ್ ಮಾಡಿ ನಗರಕ್ಕೆ ಸರಬರಾಜು ಮಾಡಲಾಗುತ್ತಿದೆ.

ಪಶ್ಚಿಮ ಭಾಗದಲ್ಲಿರುವ ಹೆಗ್ಗನಹಳ್ಳಿ **ಜಲ ಸಂಗ್ರಾಹಗಾರವು** ದಿನಂಪ್ರತಿ ಹೆಚ್ಚುವರಿಯಾಗಿ 2 ದಶ ಲಕ್ಷ ಲೀಟರ್ ನೀರು ಮತ್ತು ಕೇತಮಾರನಹಳ್ಳಿ **ಜಲ ಸಂಗ್ರಾಹಗಾರವು** 8 ದಶ ಲಕ್ಷ ಲೀಟರ್ ನೀರು ನಗರದ ಉತ್ತರ ಭಾಗಕ್ಕೆ ರವಾನಿಸಲಾಗುತ್ತಿದೆ.

ಇದೇ ರೀತಿ ದಕ್ಷಿಣ ಭಾಗದಿಂದ ಪೂರ್ವ ಭಾಗಕ್ಕೆ ಹೈಗ್ರೌಂಡ್ಸ್ ಮೂಲಕ ಹೆಚ್ಚುವರಿಯಾಗಿ ದಿನಂಪ್ರತಿ 10 ದಶ ಲಕ್ಷ ಲೀಟರ್ ರವಾನಿಸ-ಲಾಗುತ್ತಿದೆ.

ತ್ವರಿತ ಪರಿಹಾರವಾಗಿ ನಗರದ ಹಳೇ ಬಡಾವಣೆಗಳಲ್ಲಿ 358 ಕೊಳವೆ ಬಾವಿಗಳನ್ನು ಕೊರೆದು ಇವುಗಳಿಂದ ನೀರು ಸರಬರಾಜು ಮಾಡಲಾಗುತ್ತಿದೆ.

ಈ) ಬೆಂಗಳೂರು ನಗರಕ್ಕೆ ಶಾಶ್ವತವಾಗಿ ಕುಡಿಯುವ ನೀರನ್ನು ಒದಗಿಸಲು ಕಾವೇರಿ 4ನೇ ಹಂತ 2ನೇ ಘಟ್ಟ ಕೈಗೆತ್ತಿಕೊಂಡು ಇದರಿಂದ ನಗರಕ್ಕೆ ಹೆಚ್ಚುವರಿಯಾಗಿ ದಿನಂಪ್ರತಿ 500 ದಶ ಲಕ್ಷ ಲೀಟರ್ ನೀರು ಸರಬರಾಜು ಮಾಡಲು ಯೋಜನೆ ರೂಪಿಸಲಾಗಿದೆ.

771 ಶ್ರೀ ಶ್ರೀನಿವಾಸ್ ಎಂ. : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ನಗರಕ್ಕೆ ವರ್ತುಲ ರಸ್ತೆ (ರಿಂಗ್‌ರೋಡ್) ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಹಿಂದೆಯೇ ಗುರುತಿಸಿದ್ದ ಸ್ಥಳದಲ್ಲಿಯೇ ವರ್ತುಲ ರಸ್ತೆ (ರಿಂಗ್‌ರೋಡ್) ಮಾಡಲಾಗುವುದೇ ಅಥವಾ ಬೇರೆ ಯಾವುದಾದರೂ ಸ್ಥಳವನ್ನು ಗುರುತಿಸಿದೆಯೇ (ವಿವರಗಳನ್ನು ನೀಡುವುದು);

ಇ) ಮಂಡ್ಯ ನಗರದ ವರ್ತುಲ ರಸ್ತೆ ಕಾಮಗಾರಿಗಾಗಿ ನಿಗದಿಪಡಿಸಿರುವ ಅನುದಾನದ ಮೊತ್ತ ಎಷ್ಟು;

ಇ) ವರ್ತುಲ ರಸ್ತೆಯ ಕಾಮಗಾರಿಯು ಪ್ರಾರಂಭವಾಗಿರುವುದೇ;

ಉ) ಹಾಗಿದ್ದಲ್ಲಿ, ಕಾಮಗಾರಿಯು ಯಾವ ಹಂತದಲ್ಲಿದೆ (ವಿವರಗಳನ್ನು ನೀಡುವುದು)?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಇಲ್ಲ.

ಆ) ಇ) ಈ) ಮತ್ತು ಉ)

ಉದ್ಭವಿಸುವುದಿಲ್ಲ.

1063 ಶ್ರೀ ಅಮರೇಗೌಡ ಲಿಂಗನಗೌಡ ಬಯ್ಯಾಪುರ (ಕುಷ್ಟಗಿ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆ, ಲಿಂಗಸೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಹಟ್ಟಿ ಚಿನ್ನದ ಗಣಿಯಲ್ಲಿ ತಾತ್ಕಾಲಿಕವಾಗಿ ಯಾವ ಯಾವ ಭಾಗಗಳಲ್ಲಿ ಎಷ್ಟು ಜನರು ಕರ್ತವ್ಯ ನಿರ್ವಹಿಸುತ್ತಿದ್ದಾರೆ;